# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1168 |
| ಸದಸ್ಯರ ಹೆಸರು | : | ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20/12/2018 |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿಯವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾಲ್ಪನಿಕ ವೇತನ ಬಡ್ತಿಗೆ ಸಂಬಂಧಿಸಿದಂತೆ ಶ್ರೀ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ಸಲ್ಲಿಸಲಾಗಿದ್ದ ವರದಿಯನ್ನು ಸರ್ಕಾರ ಜಾರಿಗೊಳಿಸಲು ನಿರ್ಧರಿಸಿದೆಯೇ; | ಪರಿಶೀಲನೆಯಲ್ಲಿರುತ್ತದೆ. |
| ಆ) | ಹಾಗಿದ್ದಲ್ಲಿ, ಯಾವಾಗ ಜಾರಿಗೊಳಿಸಲಾಗುವುದು; ನಿಖರವಾದ ಮಾಹಿತಿಯನ್ನು ನೀಡುವುದು; | ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಪ್ರಶ್ನಿಸಿ ಅನುದಾನಿತ ಶಿಕ್ಷಣ ಸಂಸ್ಥೆಗಳು ಸಲ್ಲಿಸಿದ್ದ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣದಲ್ಲಿ ನ್ಯಾಯಾಲಯವು ದಿನಾಂಕ : 10/07/2015ರಂದು ತೀರ್ಪು ನೀಡಿ ಪ್ರಸ್ತಾಪಿತ ಅಧಿನಿಯಮವನ್ನು "struck down" ಮಾಡಿರುತ್ತದೆ. ಸದರಿ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅಪೀಲು ಸಂಖ್ಯೆ : 2476/2015 ಮತ್ತು 2467/2015ನ್ನು ದಾಖಲಿಸಿದೆ. ಸರ್ಕಾರವು ಸಲ್ಲಿಸಿದ ಅಪೀಲಿನಲ್ಲಿ ಮಾನ್ಯ ನ್ಯಾಯಾಲಯವು ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ : 27/11/2015ರಂದು ತಡೆಯಾಜ್ಞೆಯನ್ನು ಪಡೆಯಲಾಗಿದೆ. ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು, ಪ್ರಕರಣವು ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ. |
| ಇ) | ನಿರ್ಧರಿಸಿಲ್ಲವಾದರೆ, ಯಾವ ಕಾರಣಕ್ಕಾಗಿ ವಿಳಂಬಗೊಳಿಸಲಾಗಿದೆ; | |
| ಈ) | ಕಾಲ್ಪನಿಕ ವೇತನ ಬಡ್ತಿಗೆ ಸಂಬಂಧಿಸಿದಂತೆ ಸರ್ಕಾರದ ನಿಲುವೇನು? | ಪ್ರಕರಣವು ನ್ಯಾಯಾಲಯದಲ್ಲಿ ಬಾಕಿಯಿರುವುದರಿಂದ ಯಾವುದೇ ನಿಲುವು ತಳೆದಿರುವುದಿಲ್ಲ. |

(ಹೆಚ್. ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ

ಸಂಖ್ಯೆ: ಇಡಿ 704 ಎಸ್‌ಇಎಸ್ 2018)